# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
## ವಾರ್ಡ್ ಸಮಿತಿ ಸಭೆ ದಿನಾಂಕ: 07/05/2022ರ
## ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –03/2022–23 ದಿನಾಂಕ: 07.05.2022

ದಿನಾಂಕ: 07/05/2022 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಎಂ. ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ಮಹದೇವಪುರ ವಲಯ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀಮತಿ ದೀಪಾ.ವಿ | ಸಹಾಯಕ ಅಭಿಯಂತರರು ಬಿ.ಡಬ್ಲೂ.ಎಸ್.ಎಸ್.ಬಿ (ಐಡಿಯಲ್ ಹೋಮ್ಸ್) |
| 4 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |



Scanned with CamScanner

| ಕ್ರ.ಸಂ | ಸಭೆಗೆ ಗೈರು ಹಾಜರಾದ ಅಧಿಕಾರಿಗಳು | ಇಲಾಖೆ |
|---|---|---|
| 1 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೀದಿ ದೀಪ ನಿರ್ವಹಣೆ, ಬಿಬಿಎಂಪಿ, ರಾರಾ ನಗರ ವಲಯ |
| 2 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ರಸ್ತೆ ಮೂಲ ಭೂತ ಸೌಕರ್ಯವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 3 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 4 | ಪಶುಪಾಲನಾ ಅಧಿಕಾರಿಗಳು | ಪಶುಪಾಲನಾ ಇಲಾಖೆ, ಬಿಬಿಎಂಪಿ ರಾಜರಾಜೇಶ್ವರಿನಗರ ವಲಯ, |
| 5 | ವಲಯ ಅರಣ್ಯ ಅಧಿಕಾರಿಗಳು | ಅರಣ್ಯ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 6 | ತೋಟಗಾರಿಕಾ ಅಧಿಕ್ಷಕರು | ತೋಟಗಾರಿಕೆ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 7 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಂಗಳೂರು ಜಲ ಮಂಡಳಿ |
| 8 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಸ್ಕಾಂ, ಕೆಂಗೇರಿ ಮತ್ತು ಬೆಸ್ಕಾಂ ತಲಘಟ್ಟಪುರ |
| 9 | ಪೊಲೀಸ್ ಇಲಾಖೆ | ಕೆಂಗೇರಿ, ರಾಜರಾಜೇಶ್ವರಿನಗರ ಮತ್ತು ರಲಘಟ್ಟಪುರ ಪೊಲೀಸ್ ಠಾಣೆ |
| 10 | ಗುತ್ತಿಗೆದಾರರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 11 | ಕಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 12 | ಹಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.



Scanned with CamScanner

❖ <u>**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ**</u>:- ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಹಾಗೂ ಇತ್ತಿಗೆ ಕೋವಿಡ್‌ನ ರೂಪಾಂತರಿಯಾದ "ಓಮೈಕ್ರಾನ್" ವೈರಾಣು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ಕೋವಿಡ್-19ರ ಬೂಸ್ಟರ್ ಲಸಿಕೆಯನ್ನು ಎಲ್ಲ ಹಿರಿಯ ನಾಗರೀಕರು ಪಡೆಯುವಂತೆ ಹಾಗೂ ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಲಸಿಗಳ ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ <u>**ತೋಟಗಾರಿಕೆ ಇಲಾಖೆ (ರಾರಾನಗರ ವಲಯ)**</u> :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಾಲಾಜಿ ಬಡಾವಣೆ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಉದ್ಯಾನವನದಲ್ಲಿ ಸಮರ್ಪಕ ನಿರ್ವಹಣೆ ಇಲ್ಲದೇ ಗಿಡ ಮರಗಳು ಒಣಗುತ್ತಿದ್ದು, ಸಮರ್ಪಕವಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಸಭೆಗೆಯ ಗಮನಕ್ಕೆ ತರಲಾಗಿದೆ. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ವಿಷಯದ ಬಗ್ಗೆ ವಲಯದ ತೋಟಗಾರಿಕಾ ಅಧೀಕ್ಷಕರೊಂದಿಗೆ ಮಾತನಾಡಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ <u>**ಬೆಂಗಳೂರು ಜಲ ಮಂಡಳಿ**</u> :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿ ಮಳ ಬಂಧಂತಹ ಸಂಧರ್ಭಗಳಲ್ಲಿ ಒಳ ಚರಂಡಿಯ ನೀರು ಮ್ಯಾನ್ ಹೋಲ್‌ಗಳಿಂದ ಉಕ್ಕುತ್ತಿದ್ದು, ಸದರಿ ಸಮಸ್ಯೆಯನ್ನು ಪರಹಾರ ಮಾಡುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ವಿಷಯದ ಬಗ್ಗೆ ಜಲ ಮಂಡಳಿಯ ಅಧಿಕಾರಿಗಳ ಗಮನಕ್ಕೆ ತರಲು ವಾರ್ಡ್‌ನ ಸಹಾಯಕ ಅಭಿಯಂತರರುಗಳಿಗೆ ಸೂಚಿಸಿದರು.



Scanned with CamScanner

❖ <u>ವಾರ್ಡ್‌ನ ಕಾಮಗಾರಿಗಳು</u> :- 1) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿನ ನಾಲ್ಕನೇ ಅಡ್ಡರಸ್ತೆಯಲ್ಲಿ ಕಾಂಕ್ರೀಟ್ ಚರಂಡಿ ನಿರ್ಮಾಣ ಮಾಡಿಕೊಡಬೇಕೆಂದು ಹಾಗೂ ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಅನುದಾನದ ಲಭ್ಯತೆಯ ಅನುಗುಣವಾಗಿ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.

2) ವಾರ್ಡ್ ನಂ.198ರಲ್ಲಿ ಬರುವ ಬಸಪ್ಪ ಬಡಾವಣೆ, ಬಿ.ಹೆಚ್.ಇ.ಎಲ್. ಬಡಾವವಣೆ, ವಿಜಯಶ್ರೀ ಬಡಾವಣೆಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್‌ನ ಅಭಿಯಂರರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು.

3) ವಾರ್ಡ್ ನಂ.198ರಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಬಾಕಿ ಇರುವ ರಸ್ತೆಗಳನ್ನು ತುರ್ತಾಗಿ ಕೈಗೊಳ್ಳಬೇಕೆಂದು ಸದರಿ ಬಡಾವಣೆಯ ನಾಗರೀಕರು ಸಭೆಗೆ ಕೋರಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಈಗಾಗಲೇ ಬಾಲಾಜಿ ಬಡಾವಣೆಗೆ ಶೇ.80 ರಷ್ಟು ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, ಉಳಿದ ಕೆಲವು ರಸ್ತೆಗಳನ್ನು 2022-23ನೇ ಸಾಲಿನಲ್ಲಿ ಬರುವ ಅಮೃತ ನಗರೋತ್ಥಾನ ಅನುದಾನದಲ್ಲಿ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

<u>ಪ್ರತಿಯನ್ನು</u>:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.



Scanned with CamScanner

8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner